# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1. | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 158 |
| 2. | ಮಾನ್ಯ ಸದಸ್ಯರ ಹೆಸರು | ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ) |
| 3. | ಉತ್ತರಿಸಬೇಕಾದ ದಿನಾಂಕ | 21/09/2020 |
| 4. | ಉತ್ತರಿಸುವವರು | ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಕೂಲಿ ಕಾರ್ಮಿಕರಿಗೆ ಸರ್ಕಾರ ಯಾವ ರೀತಿಯ ಆರ್ಥಿಕ ಸವಲತ್ತುಗಳನ್ನು ನೀಡುತ್ತಿದೆ. | ವಿವಿಧ ವಲಯಗಳಲ್ಲಿ ಮಾಸಿಕ ವೇತನವನ್ನು ಹೊರತುಪಡಿಸಿ ದಿನಗೂಲಿ ಆಧಾರದ ಮೇಲೆ ಮತ್ತು ತುಂಡು ವೇತನ ದರದ ಆಧಾರದ ಮೇಲೆ ಕೆಲಸ ಮಾಡುವ ಕಾರ್ಮಿಕರನ್ನು ಕೂಲಿ ಕಾರ್ಮಿಕರೆಂದು ಪರಿಗಣಿಸಬಹುದಾಗಿದೆ. ಕಾರ್ಮಿಕ ಇಲಾಖೆಯು ವಿವಿಧ ಉದ್ದಿಮೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ವಿವಿಧ ವರ್ಗಗಳ ಕಾರ್ಮಿಕರಿಗೆ ಕನಿಷ್ಠ ವೇತನ ದರಗಳನ್ನು ಅಧಿಸೂಚನೆಯ ಮೂಲಕ ನಿಗಧಿ ಪಡಿಸಿರುತ್ತದೆ.<br>ಕೂಲಿ ಕಾರ್ಮಿಕರ ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಯ ದೃಷ್ಟಿಯಿಂದ ಕಾರ್ಮಿಕ ಇಲಾಖೆಯು ತನ್ನ ಅಧೀನದಲ್ಲಿ ಬರುವ ಮಂಡಳಿಗಳ ಮೂಲಕ ವಿವಿಧ ಕಲ್ಯಾಣ ಯೋಜನೆಗಳನ್ನು ಜಾರಿಗೊಳಿಸುತ್ತಿದ್ದು ವಿವರಗಳು ಈ ಕೆಳಕಂಡಂತಿದೆ:<br>**ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ**<br>ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ (ಉದ್ಯೋಗದ ಕ್ರಮೀಕರಣ ಮತ್ತು ಸೇವಾ ಷರತ್ತುಗಳು) ಕಾಯ್ದೆ, 1996ರಡಿ ನೊಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ ಹಲವು ಯೋಜನೆಗಳನ್ನು ರೂಪಿಸಲಾಗಿದೆ. ಸದರಿ ಕಾರ್ಮಿಕರಿಗೆ ವಿವಿಧ ರೀತಿಯ ಆರ್ಥಿಕ ಸವಲತ್ತುಗಳನ್ನು ನೀಡಲಾಗುತ್ತಿದ್ದು, ಮಾಹಿತಿಯನ್ನು ಅನುಬಂಧದಲ್ಲಿ ಒದಗಿಸಿದೆ.<br>• ಇದಲ್ಲದೆ ಕೋವಿಡ್-19ನ ಪರಿಣಾಮದಿಂದ ಸಂಕಷ್ಟಕ್ಕೆ ಒಳಗಾದ ನೋಂದಾಯಿತ ಕಟ್ಟಡ ಮತ್ತು ಇತರ ನಿರ್ಮಾಣ ಕಾರ್ಮಿಕರಿಗೆ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ಒಂದು ಬಾರಿ ಪರಿಹಾರವಾಗಿ ರೂ. 5,000/-ಗಳನ್ನು ಕಟ್ಟಡ ಕಾರ್ಮಿಕರ ಖಾತೆಗೆ ನೇರವಾಗಿ ವರ್ಗಾವಣೆ ಮಾಡಲಾಗಿರುತ್ತದೆ.<br>• ಈ ಸೌಲಭ್ಯವನ್ನು ತಲಾ 5000/-ರಂತೆ ಒಟ್ಟು 16,45,431 ಕಾರ್ಮಿಕರಿಗೆ ಒದಗಿಸಲಾಗಿರುತ್ತದೆ.<br>• "ಪರಿಸ್ಥಿತಿಯು ಗಂಭೀರತೆಯನ್ನು ಅರಿತು ನಿರ್ಮಾಣ ಹಾಗೂ ಅಸಂಘಟಿತ ವಲಯದ ಅಂದಾಜು 6.08 ಲಕ್ಷ ಕಾರ್ಮಿಕರಿಗೆ ದವಸ ಧಾನ್ಯ ಕಿಟ್‌ಗಳನ್ನು ಉಚಿತವಾಗಿ ನೀಡಲಾಗಿದೆ. |

Scanned with CamScanner

| | | |
|---|---|---|
| | | **<u>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ</u>**<br>• ಕರ್ನಾಟಕ ರಾಜ್ಯ ಸರ್ಕಾರವು "ಕೃಷಿ/ ತೋಟಗಾರಿಕೆ/ ಹೈನುಗಾರಿಕೆ ಕೆಲಸಗಳಲ್ಲಿ ತೊಡಗಿರುವ ಕೂಲಿ ಕಾರ್ಮಿಕರು" ಸೇರಿದಂತೆ, 43 ವರ್ಗಗಳ ಕಾರ್ಮಿಕರನ್ನು ಅಸಂಘಟಿತ ವಲಯದ ಕಾರ್ಮಿಕರೆಂದು ಗುರುತಿಸಿದೆ.<br>• ಪ್ರಸ್ತುತ ಸದರಿ ವರ್ಗದ ಕಾರ್ಮಿಕರಿಗೆ ಆರ್ಥಿಕ ಸೌಲಭ್ಯವನ್ನು ಒದಗಿಸುವ ಯಾವುದೇ ಯೋಜನೆಯನ್ನು ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯಿಂದ ಜಾರಿಗೊಳಿಸಲಾಗುತ್ತಿಲ್ಲ.<br>• ಅಸಂಘಟಿತ ಕಾರ್ಮಿಕರ ಪಟ್ಟಿಯಲ್ಲಿ ಸೇರ್ಪಡೆಯಾಗಿರುವ ಚಾಲಕರಿಗೆ ಅಪಘಾತ ಪರಿಹಾರ ಯೋಜನೆ ಜಾರಿಗೊಳಿಸಲಾಗುತ್ತಿದೆ, ಈ ಯೋಜನೆ ಅಡಿಯಲ್ಲಿ ಮೃತ ಚಾಲಕರಿಗೆ 5ಲಕ್ಷ ಹಾಗೂ ಗಾಯಗೊಂಡ ಚಾಲಕರಿಗೆ 2ಲಕ್ಷದವರೆಗೆ ಆಸ್ಪತ್ರೆ ವೆಚ್ಚ ಭರಿಸಲಾಗುವುದು. ಈವರೆಗೆ ಒಟ್ಟು 694 ಪ್ರಕರಣಗಳಲ್ಲಿ ಒಟ್ಟು 18.66 ಕೋಟಿ ಮೊತ್ತವನ್ನು ಪರಿಹಾರ ರೂಪದಲ್ಲಿ ಪಾವತಿಸಲಾಗಿದೆ.<br>• ಕೋವಿಡ್-19 ಮಹಾಮಾರಿಯಿಂದ ಸಂಕಷ್ಟಕ್ಕೆ ಒಳಗಾದ ಅಗಸರು ಮತ್ತು ಕ್ಷೌರಿಕರಿಗೆ ಮಾತ್ರ ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಜಿಕ ಭದ್ರತಾ ಮಂಡಳಿ, ಬೆಂಗಳೂರು ವತಿಯಿಂದ ಒಂದು ಬಾರಿ ಪರಿಹಾರವಾಗಿ ಅರ್ಹ ಕಾರ್ಮಿಕರಿಗೆ ರೂ. 5,000/-ಗಳನ್ನು ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯಿಂದ ಕಾರ್ಮಿಕರ ಖಾತೆಗೆ ನೇರವಾಗಿ ವರ್ಗಾವಣೆ ಮಾಡಲಾಗಿರುತ್ತದೆ. |
| (ಆ) | ಕೂಲಿ ಕಾರ್ಮಿಕರ ಶ್ರೇಯೋಭಿವೃದ್ಧಿಗ ಸರ್ಕಾರ ಯಾವ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ | ಈ ಮೇಲೆ ವಿವರಿಸಿರುವ ಆರ್ಥಿಕ ಸೌಲಭ್ಯಗಳ ಹೊರತಾಗಿ ಕೂಲಿ ಕಾರ್ಮಿಕರಿಗೆ ಪ್ರಸ್ತುತ ಯಾವುದೇ ನಿರ್ದಿಷ್ಟ ಯೋಜನೆಗಳನ್ನು ರೂಪಿಸಿರುವುದಿಲ್ಲ. ಆದರೆ 2016-17 ಹಾಗೂ 2017-18ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿದಂತೆ ಅಸಂಘಟಿತ ವಲಯದ 11 ವರ್ಗದ ಕಾರ್ಮಿಕರಾದ *"ಹಮಾಲರು, ಮನೆಗೆಲಸದವರು, ಚಿಂದಿ ಆಯುವವರು, ದರ್ಜಿಗಳು, ಮೆಕ್ಯಾನಿಕ್, ಅಗಸರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು, ಕ್ಷೌರಿಕರು ಹಾಗೂ ಮಂಡಕ್ಕಿ ಭಟ್ಟಿ ಕಾರ್ಮಿಕ"*ರನ್ನು ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ ವತಿಯಿಂದ ನೋಂದಾಯಿಸಿ ಸ್ಮಾರ್ಟ್ ಕಾರ್ಡ್‌ಗಳನ್ನು ವಿತರಿಸಲಾಗುತ್ತಿದೆ. |

ಕಾಇ 299 ಎಲ್‌ಇಟಿ 2020

*(ಅರಬೈಲ್ ಶಿವರಾಂ ಹೆಬ್ಬಾರ್)*
ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು

Scanned with CamScanner